## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ/ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಜಿ.ಎನ್.ಎಂ. ಮತ್ತು ಬಿ.ಎಸ್ಸಿ ನರ್ಸಿಂಗ್ ತರಬೇತಿ ನೀಡುವ ಬಗ್ಗೆ.

ಓದಲಾಗಿದೆ:- (1) ಸರ್ಕಾರಿ ಆದೇಶ ಸಂಖ್ಯೆ:ಸಕಇ [illegible] ಎಸ್‌ಎಲ್‌ಪಿ 2008, ದಿನಾಂಕ:[illegible]-07-2008

(2) ಸರ್ಕಾರಿ ಪತ್ರ ಸಂಖ್ಯೆ:ಸಕಇ 35 ಎಸ್‌ಎಲ್‌ಪಿ 2009, ದಿನಾಂಕ:03-06-2009

*****

ಪ್ರಸ್ತಾವನೆ:-

ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ/ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಜಿ.ಎನ್.ಎಂ. ಮತ್ತು ಬಿ.ಎಸ್ಸಿ., ನರ್ಸಿಂಗ್ ತರಬೇತಿ ನೀಡುವ ಯೋಜನೆ 2005-06ನೇ ಸಾಲಿನಿಂದ ಜಾರಿಯಲ್ಲಿರುತ್ತದೆ. ಈ ಯೋಜನೆಯಡಿ 2005-06 ನೇ ಸಾಲಿನಿಂದ ಸುಮಾರು 10,000 ಕ್ಕೂ ಹೆಚ್ಚು ಅಭ್ಯರ್ಥಿಗಳಿಗೆ ಆರ್ಥಿಕ ಸೌಲಭ್ಯ ನೀಡಲಾಗಿದ್ದು ಉಲ್ಲೇಖಿತ ನರ್ಸಿಂಗ್ ಕೋರ್ಸುಗಳಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಉದ್ಯೋಗ ಪಡೆಯಲು ಅವಕಾಶವಿರುತ್ತದೆ. ಈ ಕುರಿತಂತೆ ಇತ್ತೀಚೆಗೆ ಸಮಾಜ ಕಲ್ಯಾಣ ಇಲಾಖೆಯ ಹಿರಿಯ ಅಧಿಕಾರಿಗಳಲ್ಲದೆ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಹಾಗೂ ರಿಜಿಸ್ಟ್ರಾರ್, ಕರ್ನಾಟಕ ನರ್ಸಿಂಗ್ ಕೌನ್ಸಿಲ್ ಇವರ ಜೊತೆ ಚರ್ಚಿಸಿ ಅವರ ಸಲಹೆಗಳನ್ನು ಪಡೆಯಲಾಗಿದೆ. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಜಂಟಿ ನಿರ್ದೇಶಕರು (ವಸತಿ ನಿಲಯಗಳು), ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಈ ಮೂವರು ಜಂಟಿಯಾಗಿ ವಿಚಾರಣೆ ನಡೆಸಿ ಸಲ್ಲಿಸಿದ ವರದಿಯನ್ನು ಕೂಡ ಪರಿಶೀಲಿಸಲಾಗಿದೆ. ಸರ್ಕಾರಿ ನರ್ಸಿಂಗ್ ಶಾಲೆ/ಕಾಲೇಜುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಲಭ್ಯವಿರುವ ಸೀಟುಗಳನ್ನು ಮೊದಲು ತುಂಬಬೇಕಾಗಿದ್ದು ನಂತರ ಖಾಸಗಿ ನರ್ಸಿಂಗ್/ಶಾಲೆ ಮತ್ತು ಕಾಲೇಜುಗಳಲ್ಲಿ ಸರ್ಕಾರದ ಕೋಟಾದಲ್ಲಿ ಲಭ್ಯವಿರುವ ಸೀಟುಗಳನ್ನು ತುಂಬಬೇಕಾಗಿದೆ. ಅಗತ್ಯ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ ನರ್ಸಿಂಗ್ ಶಾಲೆ/ಕಾಲೇಜುಗಳಲ್ಲಿ ಅಭ್ಯರ್ಥಿಗಳಿಗೆ ಪ್ರವೇಶ ದೊರಕಿಸಿಕೊಡಬೇಕೆಂಬ ಅಭಿಪ್ರಾಯ ಕೂಡ ವ್ಯಕ್ತವಾಗಿದೆ. ಯಾವುದೇ ಶಾಲೆ : ಕಾಲೇಜು ಅವರದೇ ಆದ ಆಸ್ಪತ್ರೆ ಹೊಂದಿದ್ದಲ್ಲಿ ಅಂತಹ ಶಾಲೆ:ಕಾಲೇಜಿಗೆ ಆದ್ಯತೆ ನೀಡಬೇಕಾಗುತ್ತದೆ. ಇಂಡಿಯನ್ ನರ್ಸಿಂಗ್ ಕೌನ್ಸಿಲ್ ಮಾನ್ಯತೆ ಪಡೆದ ಶಾಲಾ ಕಾಲೇಜುಗಳಿಗೆ ಮಾತ್ರ ಅಭ್ಯರ್ಥಿಗಳನ್ನು ನಿಯೋಜಿಸುವುದು ಉತ್ತಮವೆಂದು ಭಾವಿಸಲಾಗಿದೆ. ಈ ಅಭ್ಯರ್ಥಿಗಳು ರಾಷ್ಟ್ರದಲ್ಲಿ ಎಲ್ಲಾದರೂ ಉದ್ಯೋಗ ಪಡೆಯಲು ಅರ್ಹರಾಗಿರುತ್ತಾರೆ. ಅಲ್ಲದೇ ರಾಜ್ಯದಲ್ಲಿ ಸಿ.ಇ.ಟಿ. ಮಾದರಿಯಲ್ಲಿ ಕೌನ್ಸಿಲಿಂಗ್ ಮುಖಾಂತರ ಅಭ್ಯರ್ಥಿಗಳನ್ನು ಆಯ್ಕೆ ಮಾಡಿದಲ್ಲಿ ಸರ್ಕಾರಿ ಕೋಟಾ ಸೀಟುಗಳನ್ನು ಪೂರ್ಣ ಪ್ರಮಾಣದಲ್ಲಿ ಬಳಸಿಕೊಳ್ಳಲು ಸಾಧ್ಯವಾಗುವುದಾಗಿ ಭಾವಿಸಲಾಗಿದೆ.

16/7/2010

ಈ ಎಲ್ಲಾ ಅಂಶಗಳನ್ನು ಪರಿಶೀಲಿಸಿ ಯೋಜನೆಯನ್ನು ಇನ್ನೂ ಹೆಚ್ಚು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಸಲುವಾಗಿ ಹಾಲಿ ಇರುವ ಸರ್ಕಾರಿ ಆದೇಶ ಪರಿಷ್ಕರಿಸಲು ನಿರ್ಧರಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಸಕಇ 85 ಎಸ್‌ಎಲ್‌ಪಿ 2009(ಭಾ), ಬೆಂಗಳೂರು, ದಿನಾಂಕ:15-07-2010</u>

2010-11 ನೇ ಸಾಲಿನಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ/ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ ನರ್ಸಿಂಗ್ ತರಬೇತಿ ನೀಡುವ ಯೋಜನೆಯನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಅನುಷ್ಠಾನಗೊಳಿಸಲು ಆದೇಶಿಸಿದೆ:-

<u>ಷರತ್ತುಗಳು:</u>

(1) ಅಭ್ಯರ್ಥಿಗಳು ಕರ್ನಾಟಕ ರಾಜ್ಯಕ್ಕೆ ಸೇರಿದವರಾಗಿರಬೇಕು.

(2) ಕೋರ್ಸ್ ಅವಧಿ-ಬಿ.ಎಸ್.ಸಿ. ನರ್ಸಿಂಗ್-4ವರ್ಷ ಹಾಗೂ ಜಿ.ಎನ್.ಎಂ. ನರ್ಸಿಂಗ್ - 3 1/2 ವರ್ಷ.

(3) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳ ಪೋಷಕರ ವಾರ್ಷಿಕ ಗರಿಷ್ಠ ವರಮಾನ ಅನುಕ್ರಮವಾಗಿ ರೂ.1.00 ಲಕ್ಷ ಮತ್ತು ರೂ.1.08 ಲಕ್ಷ ಆಗಿರುತ್ತದೆ. ಅದೇ ರೀತಿ ಹಿಂದುಳಿದ ವರ್ಗಗಳ ಅಭ್ಯರ್ಥಿಗಳ ಪೋಷಕರ ಗರಿಷ್ಠ ವಾರ್ಷಿಕ ವರಮಾನ - ರೂ.1.00 ಲಕ್ಷ ಮೀರತಕ್ಕದ್ದಲ್ಲ.

(4) ಆಯ್ಕೆಯಾದ ಅಭ್ಯರ್ಥಿಗಳನ್ನು ಇಂಡಿಯನ್ ನರ್ಸಿಂಗ್ ಕೌನ್ಸಿಲ್ (ಐ.ಎನ್.ಸಿ) ಮಾನ್ಯತೆ ಪಡೆದ ನರ್ಸಿಂಗ್ ಶಾಲೆ/ಕಾಲೇಜುಗಳಿಗೆ ಮಾತ್ರ ನಿಯೋಜಿಸುವುದು. (ಜಿ.ಎನ್.ಎಂ./ ಬಿ.ಎಸ್ಸಿ. ನರ್ಸಿಂಗ್ ಕೋರ್ಸ್‌ಗಳಿಗೆ)

(5) ಜಿ.ಎನ್.ಎಂ. ಡಿಪ್ಲೊಮೋ ಕೋರ್ಸ್‌ಗೆ ಪ್ರವೇಶ ಪಡೆಯಲು ಇಚ್ಛಿಸುವ ಅಭ್ಯರ್ಥಿಗಳು ಪಿ.ಯು.ಸಿ. ಅಥವಾ 12ನೇ ತರಗತಿ ಪರೀಕ್ಷೆಯಲ್ಲಿ ಕನಿಷ್ಠ ಶೇಕಡ 35ರಷ್ಟು ಅಂಕಗಳನ್ನು ಪಡೆದಿರತಕ್ಕದ್ದು. (ವಿಜ್ಞಾನ, ಕಲಾ ಮತ್ತು ವಾಣಿಜ್ಯ ವಿಭಾಗಕ್ಕೆ ಅನ್ವಯಿಸುವಂತೆ).

(6) ಬಿ.ಎಸ್ಸಿ. ನರ್ಸಿಂಗ್ ಕೋರ್ಸ್‌ಗೆ ಪ್ರವೇಶ ಪಡೆಯಲು ಇಚ್ಛಿಸುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಪಿ.ಯು.ಸಿ. ಅಥವಾ 12ನೇ ತರಗತಿ (ಪಿ.ಸಿ.ಬಿ) ಹಾಗೂ ಇಂಗ್ಲೀಷ್ ಸೇರಿದಂತೆ ಕನಿಷ್ಠ ಶೇಕಡ 40ರಷ್ಟು ಅಂಕಗಳನ್ನು ಪಡೆಯತಕ್ಕದ್ದು. ಅದೇ ರೀತಿ ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ಕನಿಷ್ಠ ಶೇಕಡ 45ರಷ್ಟು ಅಂಕಗಳನ್ನು ಪಡೆದಿರತಕ್ಕದ್ದು. (ಬಿ.ಎಸ್ಸಿ ಫಿಜಿಯೋಥೆರಪಿ ಕೋರ್ಸ್‌ಗೆ ಪ್ರವೇಶ ಪಡೆಯುವ ಅಭ್ಯರ್ಥಿಗಳಿಗೆ ಈ ಮೇಲೆ ನಮೂದಿಸಿರುವ ಕನಿಷ್ಠ ಅಂಕಗಳು ಅನ್ವಯವಾಗುವುದಿಲ್ಲ).

(7) ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡತಕ್ಕದ್ದು. ಅವರಲ್ಲಿ ವಿಜ್ಞಾನದ ವಿದ್ಯಾರ್ಥಿಗಳಿಗೆ ಮೊದಲನೇ ಆದ್ಯತೆ ನೀಡುವುದು.

(8) ಇಲಾಖೆಗಳು ಆಯಾ ವರ್ಷದಲ್ಲಿ ಲಭ್ಯವಿರುವ ಅನುದಾನಕ್ಕೆ ಸೀಮಿತಗೊಳಿಸಿ ಅಭ್ಯರ್ಥಿಗಳ ಸಂಖ್ಯೆ ನಿಗದಿಪಡಿಸಿಕೊಳ್ಳತಕ್ಕದ್ದು.

16/7/2010

(9) ಈ ಯೋಜನೆಗೆ ರಾಜ್ಯ ಸರ್ಕಾರ ಅನುದಾನ ಒದಗಿಸುತ್ತಿದ್ದರೂ ಭಾರತ ಸರ್ಕಾರ ಯೋಜನೆಯಡಿ ಅಂತಹ ತರಬೇತಿಗೆ ಲಭ್ಯವಿರುವ ಅನುದಾನ ವಿದ್ಯಾರ್ಥಿ ವೇತನವನ್ನು ತಪ್ಪದೆ ಪಡೆಯತಕ್ಕದ್ದು.

(10) ಆಯ್ಕೆಯಾದ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ/ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ನಿಗದಿಪಡಿಸಿದ ವೆಚ್ಚವನ್ನು ಜಿಲ್ಲಾ ಮಟ್ಟದ ಅಧಿಕಾರಿಗಳು ಪಾವತಿಸತಕ್ಕದ್ದು.

(11) ಅಭ್ಯರ್ಥಿಗಳಿಗೆ ಆಯಾ ಇಲಾಖೆಗಳು ನಡೆಸುತ್ತಿರುವ ಸರ್ಕಾರಿ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ನೀಡಬಹುದು.

(12) ಮೊದಲನೇ ವರ್ಷ ಆಯ್ಕೆಯಾದ ಅಭ್ಯರ್ಥಿಗಳು ನಂತರದ ವರ್ಷಗಳಲ್ಲಿ ಪ್ರತಿ ವರ್ಷ ನವೀಕರಣ ಅರ್ಜಿ ಸಲ್ಲಿಸತಕ್ಕದ್ದು.

(13) ಪ್ರತಿ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನವನ್ನು ಶೇಕಡ 75:25 ರ ಅನುಪಾತದಲ್ಲಿ ಜಿ.ಎನ್.ಎಂ. ಮತ್ತು ಬಿ.ಎಸ್ಸಿ. ನರ್ಸಿಂಗ್ ಅಭ್ಯರ್ಥಿಗಳಿಗೆ ಉಪಯೋಗಿಸುವುದು. ಒಂದು ಪಕ್ಷ, ಯಾವುದೇ ಕೋರ್ಸ್‌ಗೆ ಸಾಕಷ್ಟು ಅರ್ಜಿಗಳು ಬಾರದಿದ್ದಲ್ಲಿ ಅದಲು ಬದಲು ಮಾಡಿಕೊಳ್ಳಬಹುದು.

(14) ತರಬೇತಿ ಪಡೆಯುವ ಅಭ್ಯರ್ಥಿಗಳು ಶಿಕ್ಷಣ ಸಂಸ್ಥೆಯಲ್ಲಿ ಮಾಹೆಯಾನ ಶೇಕಡ 75 ರಷ್ಟು ಮತ್ತು ಅದಕ್ಕೂ ಹೆಚ್ಚಿನ ಹಾಜರಾತಿ ಹೊಂದಿರತಕ್ಕದ್ದು (ಈ ಕುರಿತಂತೆ ಶಾಲಾ : ಕಾಲೇಜಿನ ಪ್ರಾಚಾರ್ಯರಿಂದ ದೃಢೀಕರಿಸಿದ ಹಾಜರಾತಿ ಪಟ್ಟಿ ಪಡೆದು ತರಬೇತಿ ಭತ್ಯೆ ಮಂಜೂರು ಮಾಡುವುದು).

(15) ಅಭ್ಯರ್ಥಿಗಳು ಆಯಾ ಸಾಲಿನ ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು. ಉತ್ತೀರ್ಣರಾಗದ ಅಭ್ಯರ್ಥಿಗಳು ತರಬೇತಿ ಭತ್ಯೆ ಪಡೆಯಲು ಅರ್ಹರಾಗಿರುವುದಿಲ್ಲ. ಆದರೆ Carry over system ಇದ್ದಲ್ಲಿ ತರಬೇತಿ ಭತ್ಯೆ ಪಡೆಯಲು ಅರ್ಹರಿರುತ್ತಾರೆ.

(16) ಸುಳ್ಳು ಮಾಹಿತಿ/ಜಾತಿ ಪ್ರಮಾಣ ಪತ್ರ ನೀಡಿ ಪ್ರವೇಶ/ತರಬೇತಿ ಭತ್ಯೆ ಪಡೆದಿದ್ದಲ್ಲಿ ಅಂತಹ ಅಭ್ಯರ್ಥಿಗಳ ತರಬೇತಿಗೆ ನೀಡಲಾದ ಮೊತ್ತವನ್ನು ವಸೂಲಿ ಮಾಡಿ ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.

(17) ಯಾವುದೇ ಅಭ್ಯರ್ಥಿ ನರ್ಸಿಂಗ್ ತರಬೇತಿ ಪೂರ್ಣಗೊಳಿಸದೆ ಮಧ್ಯದಲ್ಲಿ ಬಿಟ್ಟು ಹೋದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ವಿಚಾರಣೆ ನಡೆಸಿ ಇಲಾಖೆಯ ಮುಖ್ಯಸ್ಥರಿಗೆ ವರದಿ ಸಲ್ಲಿಸತಕ್ಕದ್ದು. ಅಂತಹ ಪ್ರಕರಣಗಳಲ್ಲಿ ಪರಿಶೀಲಿಸಿ ಇಲಾಖಾ ಮುಖ್ಯಸ್ಥರು ಅಂತಿಮ ನಿರ್ಣಯ ತೆಗೆದುಕೊಳ್ಳುವುದು. ಒಂದು ಪಕ್ಷ, ಸಮಂಜಸವಾದ ಕಾರಣವಿಲ್ಲದಿದ್ದಲ್ಲಿ ಸಂಬಂಧಪಟ್ಟ ಅಭ್ಯರ್ಥಿಗಳಿಗೆ ನೀಡಲಾದ ಮೊತ್ತವನ್ನು ವಸೂಲಿ ಮಾಡಿ ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.

16/7/2010

(18) ಉಲ್ಲೇಖಿತ ಕೋರ್ಸುಗಳಿಗೆ ಅಭ್ಯರ್ಥಿಗಳನ್ನು ಈ ಕೆಳಕಂಡ ರಾಜ್ಯ ಮಟ್ಟದ ಸಮಿತಿ ಆಯ್ಕೆ ಮಾಡುವುದು.

- ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ – ಅಧ್ಯಕ್ಷರು
- ಆಯುಕ್ತರು/ನಿರ್ದೇಶಕರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ – ಸದಸ್ಯರು
- ನಿರ್ದೇಶಕರು, ಪರಿಶಿಷ್ಟ ಪಂಗಡ ಕಲ್ಯಾಣ ಇಲಾಖೆ – ಸದಸ್ಯರು
- ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ – ಸದಸ್ಯರು
- ಜಂಟಿ ನಿರ್ದೇಶಕರು (ಪರಿಶಿಷ್ಟ ಜಾತಿ ಉಪಯೋಜನೆ) ಸಮಾಜ ಕಲ್ಯಾಣ ಇಲಾಖೆ – ಸದಸ್ಯ ಕಾರ್ಯದರ್ಶಿ

ಸದರಿ ಸಮಿತಿ ಕೌನ್ಸಿಲಿಂಗ್ ಮುಖಾಂತರ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಈ ಕೆಳಗಿನಂತೆ ನಿಯೋಜಿಸುವ ವ್ಯವಸ್ಥೆ ಮಾಡತಕ್ಕದ್ದು:-

(ಅ)ಆಯಾ ಇಲಾಖೆಗಳು ರಾಜ್ಯ ಮಟ್ಟದಲ್ಲಿ ಜೂನ್/ಜುಲೈ ತಿಂಗಳಲ್ಲಿ ದಿನಪತ್ರಿಕೆ, ದೂರದರ್ಶನ, ರೇಡಿಯೋ, ಇತರೆ ಮಾಧ್ಯಮಗಳ ಮೂಲಕ ಪ್ರಕಟಣೆ ನೀಡಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುವುದು.

(ಆ) ವಿವಿಧ ಶಾಲಾ/ಕಾಲೇಜುಗಳಲ್ಲಿ ಸರ್ಕಾರಿ ಕೋಟಾಕ್ಕೆ ಲಭ್ಯವಿರುವ ಸೀಟುಗಳ ಮಾಹಿತಿ ಪಡೆದುಕೊಂಡು ಅಭ್ಯರ್ಥಿಗಳನ್ನು ಕೌನ್ಸಿಲಿಂಗ್ ಮುಖಾಂತರ ಆಯ್ಕೆ ಮಾಡಿ ಶಾಲಾ/ಕಾಲೇಜುಗಳಿಗೆ ನಿಯೋಜಿಸತಕ್ಕದ್ದು. ಸ್ವಂತ ಆಸ್ಪತ್ರೆ : ನಿಗದಿತ ಮೂಲಭೂತ ಸೌಕರ್ಯ ಹೊಂದಿರುವ ಶಾಲಾ:ಕಾಲೇಜುಗಳಿಗೆ ಆದ್ಯತೆ ನೀಡುವುದು.

(ಇ) ಅಭ್ಯರ್ಥಿಗಳು ಕೌನ್ಸಿಲಿಂಗ್ ಸಮಯದಲ್ಲಿ ಅವರ ಅರ್ಹತೆಗೆ ಸಂಬಂಧಿಸಿದ ಮೂಲ ಪ್ರಮಾಣ ಪತ್ರ ಗಳನ್ನು (ಜಾತಿ ಪ್ರಮಾಣ ಪತ್ರವು ಸೇರಿದಂತೆ) ಹಾಜರುಪಡಿಸತಕ್ಕದ್ದು.

(ಈ) ಕಳೆದ ಮೂರು ವರ್ಷಗಳಲ್ಲಿ ಉತ್ತಮ ಫಲಿತಾಂಶ ಪಡೆದಿರುವ ಶಾಲಾ/ಕಾಲೇಜುಗಳಿಗೆ ಅಭ್ಯರ್ಥಿಗಳನ್ನು ನಿಯೋಜಿಸುವುದು.

(ಉ)ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ಆಗಸ್ಟ್ ತಿಂಗಳೊಳಗೆ ಪೂರ್ಣಗೊಳಿಸತಕ್ಕದ್ದು.

(19) ಕೌನ್ಸಿಲಿಂಗ್ ಮುಖಾಂತರ ಪ್ರವೇಶ ಪಡೆಯದೇ ಖಾಸಗಿ ಸಂಸ್ಥೆಗಳಲ್ಲಿ ನೇರವಾಗಿ ಸ್ವಂತ ಪ್ರವೇಶ ಪಡೆದ ಅಭ್ಯರ್ಥಿಗಳು ಈ ಯೋಜನೆಯಡಿ ಆರ್ಥಿಕ ಸಹಾಯ ಪಡೆಯಲು ಅರ್ಹರಿರುವುದಿಲ್ಲ. ಆದರೆ, ಅಂತಹ ಅಭ್ಯರ್ಥಿಗಳು ವಿದ್ಯಾರ್ಥಿ ವೇತನಕ್ಕೆ ಅರ್ಹರಿದ್ದಲ್ಲಿ ಪ್ರತ್ಯೇಕವಾಗಿ ಪಡೆಯಬಹುದು.

15/7/2010

(20) ಜಿಲ್ಲಾ ಸಮಾಜ ಕಲ್ಯಾಣ /ಪರಿಶಿಷ್ಟ ಪಂಗಡ /ಹಿಂದುಳಿದ ವರ್ಗಗಳ ಅಧಿಕಾರಿಗಳು ಈ ಯೋಜನೆಯಡಿ ಆರ್ಥಿಕ ಸಹಾಯ ಮಂಜೂರು ಮಾಡಿ ವಿತರಿಸುವ ಅಧಿಕಾರ ಹೊಂದಿರುತ್ತಾರೆ. ಈ ರೀತಿ ನಿಯೋಜಿಸುವ ಅಭ್ಯರ್ಥಿಗಳ ಮೂಲ ಅರ್ಜಿಗಳಲ್ಲದೆ ಶಾಲಾ ಕಾಲೇಜುಗಳ ವಿವರ ಹಾಗೂ ಇತರ ಮಾಹಿತಿಯನ್ನು ಪ್ರತ್ಯೇಕ ರಿಜಿಸ್ಟರ್‌ನಲ್ಲಿ ನಿರ್ವಹಿಸತಕ್ಕದ್ದು. ಈ ರಿಜಿಸ್ಟರ್‌ನ್ನು ರಾಜ್ಯ ಮಟ್ಟದ ಅಧಿಕಾರಿಗಳು ಅವರ ತಪಾಸಣೆ ವೇಳೆಯಲ್ಲಿ ಪರಿಶೀಲಿಸತಕ್ಕದ್ದು.

(21) ಈ ಯೋಜನೆಯಡಿ ನೀಡಬಹುದಾದ ಪರಿಷ್ಕೃತ ಆರ್ಥಿಕ ಸಹಾಯ ಕುರಿತಂತೆ ಪ್ರತ್ಯೇಕವಾಗಿ ಆದೇಶ ಹೊರಡಿಸಲಾಗುವುದು. ಅಲ್ಲಿಯವರೆಗೆ ಹಾಲಿ ಜಾರಿಯಲ್ಲಿರುವ ಆದೇಶದನ್ವಯ ಆರ್ಥಿಕ ಸಹಾಯ ನೀಡಬಹುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

16/7/2010
(ಜಿ.ಎಂ. ಶಿವಾನಂದಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

ಗೆ:-

ಸಂಕಲನಕಾರರು (ಈ ಆದೇಶವನ್ನು ರಾಜ್ಯಪತ್ರದ ಮುಂದಿನ ಸಂಚಿಕೆಯನ್ನು ಪ್ರಕಟಿಸಿ 100 ಪ್ರತಿಗಳನ್ನು ಒದಗಿಸುವಂತೆ ಕೋರುತ್ತಾ)

ಪ್ರತಿ ಇವರಿಗೆ:-

1. ಮಹಾಲೇಖಪಾಲರು (ಎ & ಇ, ಲೆಕ್ಕಪರಿಶೋಧನೆ-1, ಲೆಕ್ಕಪರಿಶೋಧನೆ-2), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
5. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.
6. ರಿಜಿಸ್ಟ್ರಾರ್, ಕರ್ನಾಟಕ ಶುಶ್ರೂಷ ಪರಿಷತ್, ಬೆಂಗಳೂರು
7. ನಿರ್ದೇಶಕರು, ಪಿ.ಎಂ.ಇ ವಿಭಾಗ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ
8. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ
9. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, } ಸಮಾಜ ಕಲ್ಯಾಣ ಇಲಾಖೆ
10. ಸರ್ಕಾರದ ಜಂಟಿ ಕಾರ್ಯದರ್ಶಿ, } ಸಮಾಜ ಕಲ್ಯಾಣ ಇಲಾಖೆ
11. ಸರ್ಕಾರದ ಉಪ ಕಾರ್ಯದರ್ಶಿ, } ಸಮಾಜ ಕಲ್ಯಾಣ ಇಲಾಖೆ
12. ಸರ್ಕಾರದ ಅಧೀನ ಕಾರ್ಯದರ್ಶಿ-1, 2 ಮತ್ತು 3. } ಸಮಾಜ ಕಲ್ಯಾಣ ಇಲಾಖೆ
13. ಶಾಖಾ ರಕ್ಷಾ ಕಡತ
14. ಹೆಚ್ಚುವರಿ ಪ್ರತಿ-05.